ದಿಃ 19.09.2024 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು

ಮುಖ್ಯ ವಿಚಾರಣೆಃ ಶ್ರೀ ಹೆಚ್.ಎಸ್.ಆರ್, ವಕೀಲರಿಂದ ಅರ್ಜಿದಾರರ ಪರವಾಗಿ

1. ನನ್ನ ಮುಖ್ಯ ವಿಚಾರಣೆಯನ್ನು ಪ್ರಮಾಣಪತ್ರದ ಮೂಲಕ ಸಲ್ಲಿಸಿದ್ದು ಅದರಲ್ಲಿ ಬರೆದಿರುವ ಎಲ್ಲಾ ಅಂಶಗಳು ನನಗೆ ತಿಳಿದಿವೆ ಹಾಗೂ ಸತ್ಯವಾಗಿವೆ. ಅದರಲ್ಲಿರುವ ಸಹಿ ನನ್ನದೇ ಆಗಿರುತ್ತದೆ.
2. ಯು.ಡಿ.ಆರ್.ನಂಬರ್.5/2023 ನ್ನು ಯತಾ ಪ್ರತಿಯನ್ನು ಹಾಜರು ಮಾಡಿದ್ದು ನಿ.ಪಿ.1 ಎಂದು ಗುರುತಿಸಲಾಯಿತು, ದೂರಿನ ಯತಾ ಪ್ರತಿಯನ್ನು ಹಾಜರು ಮಾಡಿದ್ದು ನಿ.ಪಿ.2 ಎಂದು ಗುರುತಿಸಲಾಯಿತು, ದಿಃ 04.02.2023 ರಂದು ಯಮಸಂಧಿ ಶ್ರೀ ವೈ.ಡಿ ನಂಜುಂಡೇಗೌಡ ಶ್ರೀಮತಿ ಮಂಜಮ್ಮ ಸಾರ್ವಜನಿಕ ಆಸ್ಪತ್ರೆಯಿಂದ ಬೇಲೂರು ಠಾಣೆಗೆ ನೀಡಿದ ಮಾಹಿತಿಯ ಯತಾ ಪ್ರತಿಯನ್ನು ಹಾಜರು ಮಾಡಿದ್ದು ನಿ.ಪಿ.3 ಎಂದು ಗುರುತಿಸಲಾಯಿತು, ಮಹಜರ್ ನ ಯತಾ ಪ್ರತಿಯನ್ನು ಹಾಜರು ಮಾಡಿದ್ದು ನಿ.ಪಿ.4 ಎಂದು ಗುರುತಿಸಲಾಯಿತು, ತನಿಖಾಧಿಕಾರಿಯವರಿಗೆ ಬರೆದುಕೊಟ್ಟ ಮುಚ್ಚಳಿಯ ಯತಾ ಪ್ರತಿಯನ್ನು ಹಾಜರು ಮಾಡಿದ್ದು ನಿ.ಪಿ.5 ಎಂದು ಗುರುತಿಸಲಾಯಿತು, ಇನ್ನೊಂದು ಮುಚ್ಚಳಿಯ ಯತಾ ಪ್ರತಿಯನ್ನು ಹಾಜರು ಮಾಡಿದ್ದು ನಿ.ಪಿ.6 ಎಂದು ಗುರುತಿಸಲಾಯಿತು, ಶವ ಪರೀಕ್ಷಾ ವರದಿಯ ಯತಾ ಪ್ರತಿಯನ್ನು ಹಾಜರು ಮಾಡಿದ್ದು ನಿ.ಪಿ.7 ಎಂದು ಗುರುತಿಸಲಾಯಿತು, ಶವ ಪಂಚನಾಮಾ ವರದಿಯ ಯತಾ ಪ್ರತಿಯನ್ನು ಹಾಜರು ಮಾಡಿದ್ದು ನಿ.ಪಿ.8 ಎಂದು ಗುರುತಿಸಲಾಯಿತು, ದಿಃ 04.03.2023 ರಂದು ಎದುರುದಾರರಿಗೆ ನೀಡಿರುವ ನೋಟೀಸಿನ ಪ್ರತಿಯನ್ನು ಹಾಜರು ಮಾಡಿದ್ದು ನಿ.ಪಿ.9 ಎಂದು ಗುರುತಿಸಲಾಯಿತು, ದಿಃ 04.03.2023 ರಂದು 2 ನೇ ಎದುರುದಾರರಿಗೆ ನೀಡಿರುವ ನೋಟೀಸಿನ ಪ್ರತಿಯನ್ನು ಹಾಜರು ಮಾಡಿದ್ದು ನಿ.ಪಿ.10 ಎಂದು ಗುರುತಿಸಲಾಯಿತು, 1 ನೇ ಎದುರುದಾರರಿಗೆ ನೀಡಿರುವ ನೋಟೀಸು ಜಾರಿಯಾಗದೇ ಬಂದಿದ್ದು ನಿ.ಪಿ.11 ಎಂದು ಗುರುತಿಸಲಾಯಿತು, ಅದರಲ್ಲಿ ಇರುವ ನೋಟೀಸಿನ ಪ್ರತಿಯನ್ನು

ನಿ.ಪಿ.11(ಎ) ಎಂದು ಗುರುತಿಸಲಾಯಿತು, 2 ಅಂಚೆ ರಸೀದಿಗಳನ್ನು ಹಾಜರು ಮಾಡಿದ್ದು ನಿ.ಪಿ.12 ಮತ್ತು 13 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಕಾಲವಕಾಶ ಕೋರಿದ್ದು, ಕಾಲವಕಾಶ ನೀಡಲಾಯಿತು)

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.

ಸಾಕ್ಷಿಯ ಸಹಿ

ಮಾ

ದಿಃ 21.07.2025 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು

ಮುಂದುವರೆದ ಮುಖ್ಯ ವಿಚಾರಣೆಃ ಶ್ರೀ ಹೆಚ್.ಎಸ್.ಆರ್ ವಕೀಲರಿಂದ ಅರ್ಜಿದಾರರ ಪರವಾಗಿ

3. 5 ಛಾಯಚಿತ್ರಗಳು ಮತ್ತು ಆ ಛಾಯಚಿತ್ರಗಳಿಗೆ ಸಂಬಂಧಿಸಿದ ಸಿ.ಡಿಯನ್ನು ಹಾಜರು ಪಡಿಸಿದ್ದು, ಅವುಗಳನ್ನು ನಿ.ಪಿ.14 ರಿಂದ 19 ಎಂದು, ಆ ಛಾಯಚಿತ್ರಗಳಿಗೆ ಸಂಬಂಧಿಸಿದಂತೆ ಭಾರತೀಯ ಸಾಕ್ಷ್ಯ ಅಧಿನಿಯವರು 65 ಬಿ ರ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.20 ಎಂದು ಗುರುತಿಸಲಾಯಿತು.

ಪಾಟೀ ಸವಾಲು ಶ್ರೀ ಸಿ.ಎಸ್., ವಕೀಲರಿಂದ **2** ನೇ ಎದುರುದಾರರ ಪರವಾಗಿ

4. 2 ನೇ ಎದುರುದಾರರು ಮತ್ತು ಅವರ ಪರ ವಕೀಲರು ಗೈರು ಹಾಜರಿರುವುದರಿಂದ ಪಾಟೀ ಸವಾಲಿಗೆ ಮುಂದೂಡಲಾಯಿತು.

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.

ಸಾಕ್ಷಿಯ ಸಹಿ

ಮಾ

ಮಾ

ದಿಃ 12.03.2026 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು

ಮುಂದುವರೆದ ಮುಖ್ಯ ವಿಚಾರಣೆಃ ಶ್ರೀ ಹೆಚ್.ಎಸ್.ಆರ್ ವಕೀಲರಿಂದ ಅರ್ಜಿದಾರರ ಪರವಾಗಿ

5. ಸರ್ವೆ ನಂಬರ್ 9/1 ರ ಆರ್ ಟಿ ಸಿ ಯನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.21 ಎಂದು, ಸರ್ವೆ ನಂಬರ್ 9/1 ರ Mutation Register ಅನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.22 ಎಂದು, ನಮ್ಮ ತಂದೆಯ ಮರಣ ಪ್ರಮಾಣ ಪತ್ರವನ್ನು ಹಾಜರು ಪಡಿಸಿದ್ದು ಅದನ್ನು ನಿ.ಪಿ.23 ಎಂದು ಗುರುತಿಸಲಾಯಿತು.

(ಮುಂದುವರೆದ ಮುಖ್ಯ ವಿಚಾರಣೆಗೆ ಕಾಲವಕಾಶ ಕೋರಿದ್ದರಿಂದ ಮುಂದೂಡಲಾಯಿತು)

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.

ಸಾಕ್ಷಿಯ ಸಹಿ

ಮಾ

ದಿಃ 16.03.2026 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು

ಮುಂದುವರೆದ ಮುಖ್ಯ ವಿಚಾರಣೆಃ ಶ್ರೀ ಹೆಚ್.ಎಸ್.ಆರ್ ವಕೀಲರಿಂದ ಅರ್ಜಿದಾರರ ಪರವಾಗಿ

6. ನನ್ನ ತಂದೆಯ, ನನ್ನ ಮತ್ತು ಉಳಿದ ಅರ್ಜಿದಾರರ ಬಾಬ್ತು ಆಧಾರ್ ಕಾರ್ಡಿನ ನೋಟರೈಸ್ಡ್ ನಕಲುಗಳನ್ನು ಹಾಜರುಪಡಿಸಿದ್ದು ಇದರೊಂದಿಗೆ ಸದರಿ ಆಧಾರ್ ಕಾರ್ಡುಗಳ ಅಸಲು ಪ್ರತಿಗಳನ್ನೂ ಸಹ ನ್ಯಾಯಾಲಯದ ಪರಿಶೀಲನೆಗಾಗಿ ಹಾಜರುಪಡಿಸಿದ್ದು ನ್ಯಾಯಾಲಯವು ಆಧಾರ್ ಕಾರ್ಡುಗಳ ನೋಟರೈಸ್ಡ್ ನಕಲು ಮತ್ತು ಅಸಲು ಪ್ರತಿಗಳನ್ನು ಹೋಲಿಕೆ ಮಾಡಿ ನೋಡಲಾಗಿ ಎರಡೂ ದಾಖಲೆಗಳಲ್ಲಿನ ಅಂಶಗಳು ಒಂದೇ ಇರುತ್ತೆಯಾಗಿ ಅಸಲು ಆಧಾರ್ ಕಾರ್ಡುಗಳನ್ನು ಸಾಕ್ಷಿಗೆ ಹಿಂದಿರುಗಿಸಿ ನೋಟರೈಸ್ಡ್ ನಕಲುಗಳನ್ನು ನಿ.ಪಿ.24 ರಿಂದ 28 ಎಂದು ಗುರುತಿಸಲಾಯಿತು.

ಪಾಟೀ ಸವಾಲು ಶ್ರೀ ಎಸ್.ಬಿ.ಎ, ವಕೀಲರಿಂದ **2** ನೇ ಎದುರುದಾರರ ಪರವಾಗಿ

7. ಪಾಟೀ ಸವಾಲಿಗಾಗಿ ಸಮಯಾವಕಾಶ ಕೋರಿದ್ದರಿಂದ ಮುಂದೂಡಲಾಯಿತು.

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರಧನ್ಯಾದಂ.,
ಮೂಡಿಗೆರೆ.

ಸಾಕ್ಷಿಯ ಸಹಿ

ಮಾ

ದಿಃ 09.04.2026 ರಂದು ಸಾಕ್ಷಿಗೆ ಪ್ರಮಾಣ ವಚನ ಭೋದಿಸಲಾಯಿತು

<u>ಪಾಟೀ ಸವಾಲು ಶ್ರೀ ಎಸ್.ಬಿ.ಎ, ವಕೀಲರಿಂದ 2 ನೇ ಎದುರುದಾರರ ಪರವಾಗಿ</u>

8. ನ್ಯಾಯಾಲಯಕ್ಕೆ ಹಾಜರು ಪಡಿಸಿರುವ ದಾಖಲೆಗಳು ನನಗೆ ಗೊತ್ತು. ನಾನು 10 ನೇ ತರಗತಿ ವರೆಗೆ ಕಲಿತಿದ್ದೇನೆ. ನಿ.ಪಿ.2 ರಲ್ಲಿ ಕಂಡು ಬರುವ ಬರವಣಿಗೆ ನನ್ನದೇ ಆಗಿರುತ್ತದೆ. ನಿ.ಪಿ.2 ರಲ್ಲಿ ಬರೆದಿರುವ ವಿಚಾರಗಳು ಸತ್ಯವಾಗಿರುತ್ತವೆ. 2 ನೇ ಬಾರಿಗೆ ಬೇಲೂರು ಪೊಲೀಸ್ ಠಾಣೆಗೆ ದೂರನ್ನು ನೀಡಿದಾಗ ಯಾವುದೇ ಪ್ರಕರಣ ದಾಖಲಿಸಲಿಲ್ಲ ಎಂದರೆ ಸರಿ. ಪೊಲೀಸರು 2 ನೇ ಬಾರಿ ದೂರು ನೀಡಿದಾಗ ಪ್ರಕರಣ ದಾಖಲು ಮಾಡಲಿಲ್ಲ ಎಂದು ಮೇಲಾಧಿಕಾರಿಗಳಿಗೆ ದೂರನ್ನು ಸಲ್ಲಿಸಿದ್ದೆವು. ಬೇಲೂರಿನ ಸರ್ಕಲ್ ಇನ್ಸಪೆಕ್ಟರ್ ಗೆ ದೂರನ್ನು ನೀಡಿದ್ದೆ. ಸರ್ಕಲ್ ಇನ್ಸಪೆಕ್ಟರ್ ಗೆ ನೀಡಿದ ದೂರಿನ ಪ್ರತಿಯನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದೇನೆ. ನಾನು ಆ ರೀತಿಯ ಯಾವುದೇ ದೂರನ್ನು ಮೇಲಾಧಿಕಾರಿಗಳಿಗೆ ನೀಡಿಲ್ಲ ಮತ್ತು ಆ ಬಗ್ಗೆ ಯಾವುದೇ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿಲ್ಲ ಎಂದರೆ ಸರಿಯಲ್ಲ. 2 ನೇ ಬಾರಿಗೆ ನಾನು ನೀಡಿದ ದೂರು ಸುಳ್ಳು ಎಂಬ ಕಾರಣದಿಂದಲೇ ಪ್ರಕರಣವನ್ನು ಪೊಲೀಸರು ದಾಖಲಿಸಲಿಲ್ಲ ಎಂದರೆ ಸರಿಯಲ್ಲ.

9. ನಮ್ಮ ತಂದೆಗೆ 50 ವರ್ಷ ಪ್ರಾಯ ಆಗಿತ್ತು. ನಮ್ಮ ತಂದೆಯ ವಯಸ್ಸನ್ನು ತೋರಿಸುವ ದಾಖಲೆಯನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿಲ್ಲ ಎಂದರೆ ಸರಿಯಲ್ಲ. 1 ನೇ ಎದುರುದಾರರಿಗೆ ಕಳುಹಿಸಿದ ನೋಟೀಸು ಜಾರಿಯಾಗಿರುತ್ತದೆ. 1 ನೇ ಎದುರುದಾರರ ತಂದೆಯ ಹೆಸರನ್ನು ನೋಟೀಸಿನಲ್ಲಿ ಏನು ಕಾಣಿಸಿದ್ದೇನೆ ಎಂದು ನೆನಪಿಲ್ಲ. ನೋಟೀಸು ನೀಡುವಾಗ 1 ನೇ ಎದುರುದಾರನ ತಂದೆಯ ಹೆಸರನ್ನು ನಾವೇ ನೀಡಿದ್ದೆವು. ನಾನು ಹೇಳಿದಂತೆ 1 ನೇ ಎದುರುದಾರರಿಗೆ ಯಾವುದೇ ನೋಟೀಸು ಜಾರಿಯಾಗಲಿಲ್ಲ ಎಂದರೆ ಸರಿಯಲ್ಲ. ಆ ನೋಟೀಸಿನಲ್ಲಿ 1 ನೇ ಎದುರುದಾರರ ತಂದೆಯ ಹೆಸರನ್ನು ನಾವು ಕಾಣಿಸಿಲ್ಲ ಎಂದರೆ ಸರಿಯಲ್ಲ. 1 ನೇ ಎದುರುದಾರನಿಗೆ ಕಳುಹಿಸಿದ ನೋಟೀಸು ವಿಳಾಸ ಸರಿ

ಇಲ್ಲ ಎಂಬ ಕಾರಣದಿಂದ ವಾಪಸ್ಸು ಬಂದಿತ್ತು ಎಂದರೆ ಸರಿಯಲ್ಲ.

10. 2 ನೇ ಎದುರುದಾರ ಮೇಸ್ತ್ರಿ ಕೆಲಸ ಮಾಡುತ್ತಿದ್ದರು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. 2 ನೇ ಎದುರುದಾರ ಎಂದಿಗೂ ಮೇಸ್ತ್ರಿಯಾಗಿ ಕೆಲಸ ಮಾಡಿಲ್ಲ ಎಂದರೆ ಸುಳ್ಳು. 2 ನೇ ಎದುರುದಾರರು ನಮ್ಮ ತಂದೆಯನ್ನು ಆಸ್ಪತ್ರೆಗೆ ಕರೆದುಕೊಂಡು ಹೋಗಿದ್ದರು ಎಂದು ಸುಳ್ಳು ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ನಿ.ಪಿ.7 ಶವ ಪರೀಕ್ಷಾ ವರದಿಯಲ್ಲಿ ಎಲ್ಲಿಯು ಸಹ ನಮ್ಮ ತಂದೆ ಮರದಿಂದ ಬಿದ್ದು ಮೃತಪಟ್ಟಿದ್ದರು ಎಂದು ಬರೆದಿಲ್ಲ ಎಂದರೆ ಸರಿಯಲ್ಲ. ನಮ್ಮ ತಂದೆ ಎಂದಿಗೂ ಸಹ 1 ನೇ ಎದುರುದಾರರ ತೋಟಕ್ಕೆ ಕೆಲಸಕ್ಕೆ ಹೋಗಿಲ್ಲ ಎಂದರೆ ಸರಿಯಲ್ಲ. 1 ನೇ ಎದುರುದಾರನಿಗೆ ಎಷ್ಟು ಜಮೀನು ಇದೆ ಎಂದು ನನಗೆ ಗೊತ್ತಿಲ್ಲ. ನಿ.ಪಿ.21 ಆರ್.ಟಿ.ಸಿ ಯಾರಿಗೆ ಸೇರಿದ್ದು ಎಂದು ನನಗೆ ಗೊತ್ತಿಲ್ಲ. 1 ನೇ ಎದುರುದಾರನ ಹೆಸರಿನಲ್ಲಿ ಜಮೀನು ಇರುವ ಬಗ್ಗೆ ನಾನು ಕಂದಾಯ ಇಲಾಖೆಯಲ್ಲಿ ಪರೀಕ್ಷಿಸಿಲ್ಲ. ನಮ್ಮ ತಂದೆ 1 ನೇ ಎದುರುದಾರನ ತೋಟದಲ್ಲಿ ಕೆಲಸಕ್ಕೆ ಹೋಗಿಲ್ಲ ಮತ್ತು 2 ನೇ ಎದುರುದಾರ ನಮ್ಮ ತಂದೆಯನ್ನು ಕೆಲಸಕ್ಕೆ ಅಲ್ಲಿಗೆ ಕರೆದುಕೊಂಡು ಹೋಗಿಲ್ಲ ಎಂದರೆ ಸರಿಯಲ್ಲ.

11. ಸ್ಥಳಕ್ಕೆ ಪೊಲೀಸರು ಬಂದಿದ್ದರು. ಸ್ಥಳದಲ್ಲಿ ಬರವಣಿಗೆ ಮಾಡಿ ಛಾಯಚಿತ್ರವನ್ನು ತೆಗೆದಿದ್ದರು. ಪೊಲೀಸರು ಬರವಣಿಗೆ ಮಾಡಿ ಛಾಯಚಿತ್ರ ತೆಗೆದ ದಾಖಲೆಗಳನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದೇನೆ. ಛಾಯಚಿತ್ರ ತೆಗೆಯುವಾಗ ಪೊಲೀಸರು ಮತ್ತು ನಾವು ಛಾಯಚಿತ್ರಕ್ಕೆ ನಿಂತುಕೊಂಡಿದ್ದೆವು. ಪೊಲೀಸರು ಒಟ್ಟು 10 ಛಾಯಚಿತ್ರಗಳನ್ನು ತೆಗೆದರು. ನ್ಯಾಯಾಲಯದ ಮುಂದೆ ನಾವು ಮತ್ತು ಪೊಲೀಸರು ನಿಂತಿರುವ ಯಾವುದೇ ಛಾಯಚಿತ್ರಗಳನ್ನು ನಾವು ನ್ಯಾಯಾಲಯಕ್ಕೆ ಹಾಜರು ಪಡಿಸಿಲ್ಲ ಎಂದರೆ ಸರಿ.

12. 2 ನೇ ಎದುರುದಾರನಿಗೆ ವಕೀಲರ ಮೂಲಕ ನೀಡಿದ ನೋಟೀಸಿಗೆ 2 ನೇ ಎದುರುದಾರ ಪ್ರತ್ಯುತ್ತರ ನೀಡಿದ್ದಾರೆ ಎಂದರೆ ಸರಿ. ಪ್ರತ್ಯುತ್ತರ ನೋಟೀಸಿನಲ್ಲಿ ಏನೆಲ್ಲಾ ವಿಚಾರಗಳನ್ನು 2 ನೇ ಎದುರುದಾರ ಹೇಳಿದ್ದಾರೆ ಎಂದು ನಾನು

ತಿಳಿದುಕೊಂಡಿದ್ದೇನೆ. ಸದರಿ ಪ್ರತ್ಯುತ್ತರದಲ್ಲಿ ಬರೆದಿರುವ ವಿಚಾರಗಳು ಸತ್ಯವಾಗಿರುತ್ತವೆ ಎಂದರೆ ಸರಿ. 2 ನೇ ಎದುರುದಾರ ನೀಡಿದ ಪ್ರತ್ಯುತ್ತರ ನೋಟೀಸನ್ನು ನ್ಯಾಯಾಲಯಕ್ಕೆ ಹಾಜರು ಪಡಿಸಿದ್ದೇನೆ. ಸಾಕ್ಷಿಗೆ 2 ನೇ ಎದುರುದಾರ ತಮ್ಮ ವಕೀಲರ ಮೂಲಕ ನಮ್ಮ ವಕೀಲರಿಗೆ ನೀಡಿದ ಪ್ರತ್ಯುತ್ತರ ನೋಟೀಸು ಇದೇ ಎಂದು ತೋರಿಸಿ ಕೇಳಲಾಗಿ ಸಾಕ್ಷಿ ಹೌದು ಎಂದು ಗುರುತಿಸಿದ್ದರಿಂದ ಅದನ್ನು ನಿ.ಡಿ.1 ಎಂದು ಗುರುತಿಸಲಾಯಿತು.

13. ನಮ್ಮ ತಂದೆಗೆ ಮೂರ್ಚೆ ಕಾಯಿಲೆ ಇತ್ತು ಎಂದರೆ ಸರಿಯಲ್ಲ. ನಮ್ಮ ತಂದೆಗೆ ಮೂರ್ಚೆ ಕಾಯಿಲೆ ಇದ್ದು, ಅವರು ಬಿದ್ದು ತಲೆಗೆ ಗಾಯವಾಗಿ ಮೃತಪಟ್ಟರು ಎಂದರೆ ಸುಳ್ಳು. 1 ನೇ ಎದುರುದಾರನ ಮೇಲೆ ಇರುವ ದ್ವೇಷದ ಕಾರಣ ಈ ಅರ್ಜಿಯನ್ನು ನ್ಯಾಯಾಲಯದಲ್ಲಿ ಸಲ್ಲಿಸಿದ್ದೇವೆ ಎಂದರೆ ಸರಿಯಲ್ಲ. ಸುಳ್ಳು ಅರ್ಜಿಯನ್ನು ಸಲ್ಲಿಸಿರುವುದರಿಂದ ನಾನು ಯಾವುದೇ ಪರಿಹಾರವನ್ನು ಪಡೆಯಲು ಅರ್ಹರಲ್ಲ ಎಂದರೆ ಸರಿಯಲ್ಲ. ಸುಳ್ಳು ಪ್ರಮಾಣ ಪತ್ರವನ್ನು ಸಲ್ಲಿಸಿ ಸುಳ್ಳು ಸಾಕ್ಷಿ ಹೇಳುತ್ತಿದ್ದೇನೆ ಎಂದರೆ ಸರಿಯಲ್ಲ. ವಕೀಲರ ಮೂಲಕ 1 ನೇ ಎದುರುದಾರನಿಗೆ ನೀಡಿದ ನೋಟೀಸು ಮತ್ತು ಅರ್ಜಿಯಲ್ಲಿ ಹೇಳಿರುವ ವಿಚಾರಗಳಿಗೂ ಸಾಕಷ್ಟು ವ್ಯತ್ಯಾಸ ಇದೆ ಎಂದರೆ ಸರಿಯಲ್ಲ. ಈ ಕೇಸಿಗಾಗಿ ದಾಖಲೆಗಳನ್ನು ಸೃಷ್ಟಿಸಿ ಹಾಜರು ಪಡಿಸಿದ್ದೇನೆ ಎಂದರೆ ಸರಿಯಲ್ಲ.

<u>ಮರುವಿಚಾರಣೆ ಇಲ್ಲ</u>

(ತೆರದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿ ಮುದ್ರಿಸಲಾಯಿತು)

ಓ.ಹೇ.ಕೇ.ಸ.ಇ.ಎ.ಒ.

ಹಿರಿಯ ಸಿವಿಲ್ ಜಡ್ಜ್ ಮತ್ತು ಪ್ರದನ್ಯಾದಂ.,
ಮೂಡಿಗೆರೆ.

ಸಾಕ್ಷಿಯ ಸಹಿ

ಮಾ